ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ಸದಸ್ಯರ ಹೆಸರು	:	ಡಾ : ಚಂದ್ರಶೇಖರ್ ಬಿ.ಪಾಟೀಲ್ (ಪದವೀಧರರ ಕ್ಷೇತ್ರ)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	**778**
ಉತ್ತರಿಸಬೇಕಾದ ದಿನಾಂಕ	:	23.02.2022
ಉತ್ತರಿಸಬೇಕಾದ ಸಚಿವರು	:	ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಬೀದರ್ ಜಿಲ್ಲೆಯಲ್ಲಿ ಆಶ್ರಯ, ಅಂಬೇಡ್ಕರ್, ಬಸವ ಹಾಗೂ ಇತರೆ ಯೋಜನೆಗಳು, ರಾಜೀವ್ ಗಾಂಧಿ ವಸತಿ ನಿಗಮದಲ್ಲಿ ಸ್ಥಗಿತಗೊಂಡಿದ್ದು, ಬಡ ಫಲಾನುಭವಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ರಾಜೀವ್ ಗಾಂಧಿ ವಸತಿ ನಿಗಮದಿಂದ ಅನುಷ್ಠಾನಗೊಳಿಸುತ್ತಿರುವ ಅಂಬೇಡ್ಕರ್, ಬಸವ ಹಾಗೂ ಇತರೆ ಯಾವುದೇ ವಸತಿ ಯೋಜನೆಗಳನ್ನು ಸ್ಥಗಿತಗೊಳಿಸಿರುವುದಿಲ್ಲ. ಪ್ರಸಕ್ತ ಸರ್ಕಾರದ ಅವಧಿಯಲ್ಲಿ ಬೀದರ್ ಜಿಲ್ಲೆಯಲ್ಲಿ ವಿವಿಧ ವಸತಿ ಯೋಜನೆಗಳಡಿ ಹಿಂದಿನ ಶ್ರೇಣಿಗಳಲ್ಲಿ ಪ್ರಗತಿಯಲ್ಲಿದ್ದ ಮನೆಗಳ ಪೈಕಿ 10981 ಮನೆಗಳನ್ನು ಪೂರ್ಣಗೊಳಿಸಲಾಗಿದ್ದು, ಈ ಅವಧಿಯಲ್ಲಿ ಒಟ್ಟಾರೆ ಬಿ.ಎಲ್.ಸಿ ಮತ್ತು ಎ.ಹೆಚ್.ಪಿ ಯೋಜನೆಯಡಿ ರೂ.163.80 ಕೋಟಿಗಳನ್ನು ಖರ್ಚು ಮಾಡಲಾಗಿದೆ. 2010-11 ರಿಂದ ಇಲ್ಲಿಯವರೆಗೆ ಬೀದರ್ ಜಿಲ್ಲೆಯಲ್ಲಿ ವಿವಿಧ ವಸತಿ ಯೋಜನೆಯಡಿಯಲ್ಲಿ ಒಟ್ಟು 123639 ಮನೆಗಳನ್ನು ಮಂಜೂರು ಮಾಡಲಾಗಿದ್ದು, 79805 ಮನೆಗಳು ಪೂರ್ಣಗೊಂಡಿದ್ದು, 20447 ಮನೆಗಳು ವಿವಿಧ ಹಂತದಲ್ಲಿ ಪ್ರಗತಿಯಲ್ಲಿರುತ್ತವೆ. 14038 ಮನೆಗಳು ಪ್ರಾರಂಭ ಮಾಡಿಕೊಂಡಿರುವುದಿಲ್ಲ. ಇನ್ನೂಳಿದಂತೆ 9349 ಮನೆಗಳು ನಿಯಮಾನುಸಾರ ಬ್ಲಾಕ್ ಆಗಿ ರದ್ದಾಗಿರುತ್ತವೆ.
ಆ)	ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)	ವಿವಿಧ ವಸತಿ ಯೋಜನೆಗಳಡಿ ಪ್ರಗತಿಯಲ್ಲಿರುವ ಮನೆಗಳ ಜಿ.ಪಿ.ಎಸ್. ಆಧಾರಿತ ಭೌತಿಕ ಪ್ರಗತಿಗನುಗುಣವಾಗಿ ಅರ್ಹಗೊಂಡ ಫಲಾನುಭವಿಗಳಿಗೆ ಅನುದಾನ ಬಿಡುಗಡೆ ಮಾಡಲಾಗುತ್ತಿದೆ. ಸರ್ಕಾರದ ಆದೇಶ ಸಂಖ್ಯೆ : ವಇ 44 ಹೆಚ್ ಎಹೆಚ್ 2021(ಭಾಗ-1), ದಿನಾಂಕ :16.12.2021 ರಲ್ಲಿ 2021-22 ನೇ ಸಾಲಿನಲ್ಲಿ ಗ್ರಾಮೀಣ ಪ್ರದೇಶಕ್ಕೆ 4 ಲಕ್ಷಗಳ ಮನೆಗಳ ಗುರಿಯನ್ನು ಹಾಗೂ ನಗರ ಪ್ರದೇಶಕ್ಕೆ 1 ಲಕ್ಷ ಹೊಸ ಮನೆಗಳ ಗುರಿಯನ್ನು ನಿಗದಿಪಡಿಸಿ ಆದೇಶಿಸಲಾಗಿದೆ. ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ: ವಇ 44 ಹೆಚ್ ಎಹೆಚ್ 2021(ಭಾಗ-2), ದಿನಾಂಕ :31.12.2021 ರಲ್ಲಿ ಗ್ರಾಮ ಪಂಚಾಯತಿ/ ನಗರ ಸ್ಥಳೀಯ ಸಂಸ್ಥೆವಾರು ಹಂಚಿಕೆ ಮಾಡಿ ಆದೇಶಿಸಲಾಗಿದೆ.

		ಬೀದರ್ ಜಿಲ್ಲೆಗೆ ವಿವಿಧ ವಸತಿ ಯೋಜನೆಯಡಿ ಹೊಸ ಮನೆಗಳ ಗುರಿ ಮಂಜೂರು ಮಾಡಿರುವ ಮನೆಗಳ ವಿವರ ಕೆಳಕಂಡಂತಿದೆ.

ಯೋಜನೆ	ಹೊಸ ಮನೆಗಳ ಗುರಿ
ಬಸವ ವಸತಿ ಯೋಜನೆ	5329
ಡಾ. ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆ(ಗ್ರಾಮೀಣ)	1731
ಡಾ. ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆ(ನಗರ)	132
ವಾಜಪೇಯಿ ನಗರ ವಸತಿ ಯೋಜನೆ	418
ಒಟ್ಟು	**7610**

ಸಂಖ್ಯೆ :ವಇ 82 ಹೆಚ್‌ಎಂ 2022

(ವಿ. ಸೋಮಣ್ಣ)
ವಸತಿ ಮತ್ತು ಮೂಲಸೌಲಭ್ಯ
ಅಭಿವೃದ್ಧಿ ಸಚಿವರು